ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 29–10–2020

# ಮಾಧ್ಯಮ ಆಮಂತ್ರಣ

1) ಕರ್ನಾಟಕ ರಾಜ್ಯ ಮೀಸಲು ಪೊಲೀಸ್

**"ರಾಷ್ಟ್ರೀಯ ಐಕ್ಯತಾ ದಿನಾಚರಣೆ" ಪ್ರಯುಕ್ತ "ಸೈಕಲ್ ಜಾಥಾ"**

ಚಾಲನೆ : ಬಸವರಾಜು ಬೊಮ್ಮಾಯಿ

ಗೃಹ ಸಚಿವರು.

ದಿನಾಂಕ : 31–10–2020 , ಶನಿವಾರ ಸಮಯ : ಬೆಳಿಗ್ಗೆ 7.00 ಗಂಟೆ

ಸ್ಥಳ : ವಿಧಾನಸೌಧದ ಮೆಟ್ಟಿಲುಗಳ ಮುಂಭಾಗ, ಬೆಂಗಳೂರು.

2) ಸಾರ್ವಜನಿಕ ಶಿಕ್ಷಣ ಇಲಾಖೆ

ಕರ್ನಾಟಕ ರಾಜ್ಯೋತ್ಸವ ಸಮಾರಂಭ– 2020

ಧ್ವಜಾರೋಹಣ ಹಾಗೂ ರಾಜ್ಯೋತ್ಸವ ಸಂದೇಶ

ಬಿ. ಎಸ್. ಯಡಿಯೂರಪ್ಪ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಪ್ರಸ್ತಾವಿಕ ನುಡಿ :

ಎಸ್. ಸುರೇಶ್‌ಕುಮಾರ್,

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು

ದಿನಾಂಕ : 01–11–2020 ಭಾನುವಾರ ಸಮಯ : ಬೆಳಿಗ್ಗೆ : 9–00 ಗಂಟೆಗೆ

ಸ್ಥಳ : ಶ್ರೀ ಕಂಠೀರವ ಕ್ರೀಡಾಂಗಣ, ಬೆಂಗಳೂರು

## ಪತ್ರಿಕಾ ಪ್ರಕಟಣೆ

## ರಾಜ್ಯಪಾಲರಿಂದ ಈದ್ ಮಿಲಾದ್ ಶುಭಾಶಯ

**ಬೆಂಗಳೂರು, ಅಕ್ಟೋಬರ್ 29 (ಕರ್ನಾಟಕ ವಾರ್ತೆ):**

ಪ್ರವಾದಿ ಮೊಹಮದ್ ಅವರ ಜನ್ಮದಿನದಂದು ಆಚರಿಸುವ ಈದ್ ಮಿಲಾದ್ ಉನ್–ನಬಿ ಹಬ್ಬಕ್ಕೆ ಎಲ್ಲಾ ಮುಸ್ಲಿಂ ಬಾಂಧವರಿಗೆ ಹೃತ್ಪೂರ್ವಕ ಶುಭಾಶಯಗಳನ್ನು ರಾಜ್ಯಪಾಲರಾದ ವಾಜುಭಾಯಿ ಅರ್ಪಿಸಿದರು.

ಪ್ರವಾದಿ ಮೊಹಮ್ಮದ್ ಅವರ ಜೀವನವು ಮಾನವಕುಲದ ಪ್ರೀತಿ, ಸಹೋಧರತ್ವ ಮತ್ತು ಮಾನವ ಕುಲದ ಸದ್ಗುಣಗಳ ಸ್ಪೂರ್ತಿದಾಯಕ ಕಥೆಯಾಗಿದೆ. ನಾವು ನಮ್ಮ ಸಹವರ್ತಿಗಳೊಂದಿಗೆ ನಂಬಿಕೆ, ಕಾಳಜಿ ಮತ್ತು ಸಹಾನುಭೂತಿಯಿಂದ ವರ್ತಿಸಿದಾಗ ಮಾತ್ರ ಪ್ರವಾದಿಯ ಧ್ಯೇಯವು ನೆರವೇರುತ್ತದೆ. ಅವರ ಜನ್ಮದಿನವು ವಿಶ್ವದ ಪ್ರತಿಯೊಬ್ಬರಲ್ಲಿಯೂ ಶಾಂತಿ ಮತ್ತು ಅಭಿಮಾನವನ್ನು ಬೆಳೆಸಲಿ ಎಂದು ರಾಜ್ಯಪಾಲ ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

# Governor’s Message

Bengaluru, October 29 (Karnataka Information)

Karnataka Governor Vajubhai Vala has extended his warm greetings to the Muslim brethren of the State on the occasion of Eid Milad-Un Nabi Birthday of Prophet Mohammad.

The Life of the prophet has been an inspiring saga of love, brotherhood and virtue of mankind. The Prophet’s mission is fulfilled in each of us when we serve our fellowmen with faith, trust, caring and compassion.

May the birthday of Prophet Mohamad usher in peace and good with amongst all says Honourable Governor in his message

## ಡಿಜಿಟಲ್ ಪಾವತಿ ಮೂಲಕ ರಸಗೊಬ್ಬರ ಮಾರಾಟ

ಬೆಂಗಳೂರು, ಅಕ್ಟೋಬರ್ 29 (ಕರ್ನಾಟಕ ವಾರ್ತೆ):

"ಕೇಂದ್ರ ಸರ್ಕಾರದಿಂದ ರಸಗೊಬ್ಬರದಲ್ಲಿ ನೇರ ನೆರವು ವರ್ಗಾವಣೆ ಯೋಜನೆಯಡಿ ಎಲ್ಲಾ ರಸಗೊಬ್ಬರ ಚಿಲ್ಲರೆ ಮಾರಾಟ ಮಳಿಗೆಗಳಲ್ಲಿ ರೈತರಿಗೆ ರಸಗೊಬ್ಬರವನ್ನು ಮಾರಾಟ ಮಾಡಲು ನಗದು ರಹಿತ / ಡಿಜಿಟಲ್ ಪಾವತಿ ವ್ಯವಸ್ಥೆಯನ್ನು ಉತ್ತೇಜಿಸಲಾಗುತ್ತಿದೆ. ರಸಗೊಬ್ಬರ ಚಿಲ್ಲರೆ ಮಾರಾಟಗಾರರು ತಮ್ಮ ಚಿಲ್ಲರೆ ಮಾರಾಟ ಮಳಿಗೆಗಳಲ್ಲಿ ರಸಗೊಬ್ಬರಗಳ ಮಾರಾಟಕ್ಕಾಗಿ ಡಿಜಿಟಲ್ ಪಾವತಿಗಳನ್ನು ಸ್ವೀಕರಿಸುವ ವ್ಯವಸ್ಥೆಯನ್ನು ಮಾಡಲು ನಿರ್ದೇಶಿಸಲಾಗಿದೆ. ಆದ್ದರಿಂದ ಎಲ್ಲಾ ಚಿಲ್ಲರೆ ಮಾರಾಟಗಾರರು ತಮ್ಮ ಮಳಿಗೆಗಳಲ್ಲಿ ತಪ್ಪದೇ ಡಿಜಿಟಲ್ ಪಾವತಿ ವ್ಯವಸ್ಥೆಯನ್ನು ಕೈಗೊಂಡು ಸಹಕರಿಸಲು ಪ್ರಕಟಣೆ ತಿಳಿಸಿದೆ.

## ಆತ್ಮೀಯ ಬೀಳ್ಕೊಡುಗೆ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕೇಂದ್ರ ಕಚೇರಿಯಲ್ಲಿ ಜಂಟಿ ನಿರ್ದೇಶಕರಾಗಿ ಕ್ರಿಯಾಶೀಲರಾಗಿ ಕಾರ್ಯ ನಿರ್ವಹಿಸಿ ಸ್ವಯಂ ನಿವೃತ್ತಿ ಹೊಂದಿದ ಎ. ಆರ್. ಪ್ರಕಾಶ್ ಅವರಿಗೆ ಇಲಾಖೆಯಲ್ಲಿ ಇಂದು ಆತ್ಮೀಯವಾಗಿ ಬೀಳ್ಕೊಡಲಾಯಿತು. ಜಂಟಿ ನಿರ್ದೇಶಕರಾದ ಡಿ.ಪಿ.ಮುರಳೀಧರ್, ಇಲಾಖೆಯ ಇತರ ಅಧಿಕಾರಿಗಳು ಹಾಗೂ ಸಿಬ್ಬಂದಿ ಈ ಸಂದರ್ಭದಲ್ಲಿ ಹಾಜರಿದ್ದರು.

ಇವರು ಕಳೆದ 30 ವರ್ಷಗಳಲ್ಲಿ ಹೊಸಪೇಟೆ, ಕಲಬುರಗಿ, ಮೈಸೂರು ಮತ್ತು ಬೆಂಗಳೂರಿನ ಕೇಂದ್ರ ಕಚೇರಿಯಲ್ಲಿ ಅಧಿಕಾರಿಗಳಾಗಿ ಸೇವೆ ಸಲ್ಲಿಸಿದ್ದರು.

ಛಾಯಾಚಿತ್ರ ಲಗತ್ತಿಸಿದೆ)

## ಹುಸಿಯಾದ ಕೇಂದ್ರ ಸಚಿವರ ಭರವಸೆ: ಕನ್ನಡಿಗರ ಕೈ ತಪ್ಪುತ್ತಿರುವ ಬ್ಯಾಂಕಿಂಗ್ ಉದ್ಯೋಗಗಳು – ಟಿ.ಎಸ್.ನಾಗಾಭರಣ ಬೇಸರ

ಬೆಂಗಳೂರು, ಅಕ್ಟೋಬರ್ 29 (ಕರ್ನಾಟಕ ವಾರ್ತೆ):

ಬ್ಯಾಂಕಿಂಗ್ ಸೇವೆಗಳಿಗೆ ಸಂಬಂಧಿಸಿದ ಎಲ್ಲ ನೇಮಕಾತಿ ಪರೀಕ್ಷೆಗಳನ್ನು ರಾಜ್ಯ ಭಾಷೆಗಳಲ್ಲಿ ನಡೆಸುವಂತೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ನಿರಂತರವಾಗಿ ಒತ್ತಾಯಿಸುತ್ತಿದ್ದು, ಈ ಸಂಬಂಧ ಹಲವು ಭಾರಿ ಕೇಂದ್ರ ವಿತ್ತ ಸಚಿವರನ್ನು ಖುದ್ದು ಭೇಟಿ ನೀಡಿ ಮನವಿಗಳನ್ನು, ಕೋರಿಕೆಗಳನ್ನು ಸಲ್ಲಿಸಲಾಗಿದ್ದರೂ ಸಹ ಹಳೆಯ ಮಾರ್ಗಸೂಚಿಗಳನ್ವಯ ಪರೀಕ್ಷೆ ನಡೆಸಲು ಸಿದ್ಧತೆ ಮಾಡಿಕೊಳ್ಳುತ್ತಿರುವ ಐಬಿಪಿಎಸ್‌ನ ಕ್ರಮ ಖಂಡನಾರ್ಹವಾಗಿದೆ ಎಂದು **ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್.ನಾಗಾಭರಣ ಅವರು** ಬೇಸರ ವ್ಯಕ್ತಪಡಿಸಿದ್ದಾರೆ.

ಕನ್ನಡ ಅಭಿವೃದ್ಧಿ ಪ್ರಾಧಿಕಾರವು ವಿತ್ತ ಸಚಿವರಾದ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿ ಮಾಡಿ ಕನ್ನಡದಲ್ಲಿ ಬ್ಯಾಂಕಿಂಗ್ ಪರೀಕ್ಷೆಗಳನ್ನು ಬರೆಯಲು ಅನುವು ಮಾಡಿಕೊಡುವಂತೆ ಮನವಿ ಮಾಡಲಾಗಿದ್ದ ಹಿನ್ನೆಲೆಯಲ್ಲಿ ಕನ್ನಡದಲ್ಲಿ ಪರೀಕ್ಷೆಗಳನ್ನು ನಡೆಸುವುದಾಗಿ ಕೇಂದ್ರ ಸಚಿವರು ಭರವಸೆಗಳನ್ನು ನೀಡಿದ್ದರು. ಆದರೆ ಕೇಂದ್ರ ಸಚಿವರ ಭರವಸೆಗಳು ಹುಸಿಯಾಗಿದ್ದು, **ಬ್ಯಾಂಕಿಂಗ್ ಕ್ಷೇತ್ರದ ಉದ್ಯೋಗಗಳು ಕನ್ನಡಿಗರ ಕೈ ತಪ್ಪುತ್ತಿರುವುದು ಅತ್ಯಂತ ನೋವಿನ ವಿಷಯವಾಗಿದೆ** ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಬ್ಯಾಂಕಿಂಗ್ ನೇಮಕಾತಿಗೆ ಸಂಬಂಧಿಸಿದಂತೆ ಕನ್ನಡವು ಸೇರಿದಂತೆ ಎಲ್ಲ ರಾಜ್ಯಭಾಷೆಗಳಲ್ಲಿ ಪರೀಕ್ಷೆ ಬರೆಯಲು ಅವಕಾಶ ಮಾಡಿಕೊಡಬೇಕೆಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್.ನಾಗಾಭರಣ ಅವರು **ಕೇಂದ್ರ ವಿತ್ತ ಸಚಿವರಾದ ನಿರ್ಮಲಾ ಸೀತಾರಾಮನ್** ಅವರಲ್ಲಿ ಮನವಿ ಮಾಡಿದ್ದಾರೆ.

ಸಂವಿಧಾನದ ಪರಿಚ್ಛೇದ–೮ರಲ್ಲಿ ಎಲ್ಲ ರಾಜ್ಯಭಾಷೆಗಳಿಗೂ ಮಾನ್ಯತೆ ನೀಡುವಂತೆ ವಿವರಿಸಲಾಗಿದೆ. ಹಾಗಾಗಿ ಬ್ಯಾಂಕಿಂಗ್ ನೇಮಕಾತಿಗೆ ಐಬಿಪಿಎಸ್ ನಡೆಸುವ ಪರೀಕ್ಷೆಗಳನ್ನು ಕನ್ನಡದಲ್ಲಿ ಬರೆಯಲು ಅವಕಾಶ ಕಲ್ಪಿಸುವಂತೆ ನಿರ್ದೇಶನ ನೀಡಬೇಕೆಂದು ಕೇಂದ್ರ ಸಚಿವರಿಗೆ ಬರೆಯಲಾಗಿರುವ ಪತ್ರದಲ್ಲಿ ಪ್ರಸ್ತಾಪಿಸಿದ್ದಾರೆ.

ಹೀಗಿದ್ದರೂ ಮುಂದಿನ ಜನವರಿಯಲ್ಲಿ ನಡೆಯಲಿರುವ ಬ್ಯಾಂಕಿಂಗ್ ಪರೀಕ್ಷೆಗಳನ್ನು ಹಿಂದಿ ಮತ್ತು ಇಂಗ್ಲಿಷ್ ಭಾಷೆಯಲ್ಲಿ ನಡೆಸಲು ಐಬಿಪಿಎಸ್ ಸಿದ್ಧತೆ ನಡೆಸುತ್ತಿರುವುದರಿಂದ ಸ್ಥಳೀಯ ಭಾಷೆಯಲ್ಲಿ ಪ್ರಾವೀಣ್ಯತೆ

ಹೊಂದಿರುವ ಅಭ್ಯರ್ಥಿಗಳಿಗೆ ಅನ್ಯಾಯವಾಗಲಿದ್ದು, ಕನ್ನಡದಲ್ಲಿ ಪರೀಕ್ಷೆಗಳನ್ನು ನಡೆಸುವಂತೆ ಐಬಿಪಿಎಸ್‌ಗೆ ನಿರ್ದೇಶನ ನೀಡುವಂತೆ ಒತ್ತಾಯಿಸಿದ್ದಾರೆ.

ಗ್ರಾಮಮಟ್ಟದಲ್ಲೂ ಬ್ಯಾಂಕಿಂಗ್ ಸೌಲಭ್ಯವಿರುವುದರಿಂದ ಗ್ರಾಮೀಣರಿಗೆ ಸ್ಥಳೀಯ ಭಾಷೆಯಲ್ಲಿ ಮಾತ್ರ ಸಂವಹನ ನಡೆಸಲು ಸಾಧ್ಯವಿರುತ್ತದೆ. ಹಾಗಾಗಿ ರಾಜ್ಯಭಾಷೆಗಳ ಪ್ರಾವೀಣ್ಯತೆಗೆ ಸಂಬಂಧಿಸಿದಂತೆ ಹೊಸ ಮಾನದಂಡಗಳನ್ನು ರೂಪಿಸಿ ಕನ್ನಡವೂ ಸೇರಿದಂತೆ ಎಲ್ಲ ರಾಜ್ಯಭಾಷೆಗಳಲ್ಲಿ ಬ್ಯಾಂಕಿಂಗ್ ಪರೀಕ್ಷೆಗಳನ್ನು ನಡೆಸುವಂತೆ ಆಗ್ರಹಿಸಿದ್ದಾರೆ.